**All India Radio: Bangalore**
**National Bulletins In Kannada**
**17.08.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.08.2025 / 7.35 am**

<><*<><>*><>

ಮುಖ್ಯಾಂಶಗಳು

- ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಭೇಟಿ ನೀಡಿದ್ದ ಶುಭಾಂಶು ಶುಕ್ಲಾ ಇಂದು ಸ್ವದೇಶಕ್ಕೆ ವಾಪಸ್; ಅದ್ದೂರಿ ಸ್ವಾಗತ
- ಇಂದು ನವದೆಹಲಿಯಲ್ಲಿ ಮಹತ್ವದ ಸಂಸದೀಯ ಮಂಡಳಿ ಸಭೆ; ಉಪರಾಷ್ಟ್ರಪತಿ ಅಭ್ಯರ್ಥಿ ಆಯ್ಕೆ ಸಾಧ್ಯತೆ
- ಕರ್ನಾಟಕದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ; ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ
- ಸೈಫಾನ್ ಇಂಟರ್‌ನ್ಯಾಷನಲ್ ಬ್ಯಾಡ್ಮಿಂಟನ್ ಟೂರ್ನಿ; ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತದ ತಾನ್ಯಾ ಹೇಮಂತ್
- ಬೇಗಾ ಓಪನ್ ಸ್ಕ್ಯಾಷ್ ಟೂರ್ನಿ; ಫೈನಲ್‌ನಲ್ಲಿ ಈಜಿಪ್ಟ್‌ನ ಹಬೀಬಾ ಹನಿ ವಿರುದ್ಧ ಪ್ರಶಸ್ತಿಗಾಗಿ ಸೆಣಸಲಿರುವ ಭಾರತದ ಅನಹತ್ ಸಿಂಗ್

************

ಭಾರತದ ಬಾಹ್ಯಾಕಾಶ ಕ್ಷೇತ್ರದಲ್ಲಿ ತನ್ನದೇ ಆದ ಹೆಗ್ಗುರುತು ಮೂಡಿಸಿರುವ ಕ್ಯಾಪ್ಟನ್ ಶುಭಾಂಶು ಶುಕ್ಲಾ ಇಂದು ಮುಂಜಾನೆ ಸ್ವದೇಶಕ್ಕೆ ವಾಪಸಾಗಿದ್ದಾರೆ. ದೆಹಲಿಯ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದಾಗ ಅವರಿಗೆ ಆತ್ಮೀಯ ಸ್ವಾಗತ ದೊರೆಯಿತು. ಅವರನ್ನು ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ಅವರು ವಿಮಾನ ನಿಲ್ದಾಣದಲ್ಲಿ ಆತ್ಮೀಯವಾಗಿ ಬರಮಾಡಿಕೊಂಡರು. ಅವರನ್ನು ಮನೆಗೆ ಸ್ವಾಗತಿಸಲು ಅವರ ಪತ್ನಿ ಮತ್ತು ಮಗ ಕೂಡ ಹಾಜರಿದ್ದರು. ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಭೇಟಿ ನೀಡಿದ ಮೊದಲ ಭಾರತೀಯರಾಗಿ ಇತಿಹಾಸ ನಿರ್ಮಿಸಿದ ನಂತರ, ಶುಭಾಂಶು ಶುಕ್ಲಾ ತಮ್ಮ ನೆಲಮಟ್ಟದ ಕಾರ್ಯಾಚರಣೆಯ ಭೌತಿಕ ಬೇಡಿಕೆಗಳಿಂದ ಚೇತರಿಸಿಕೊಳ್ಳಲು ಅಮೆರಿಕದಲ್ಲಿದ್ದರು. ಈ ವ? ಜೂನ್ ೨೫ ರಂದು ಫ್ಲೋರಿಡಾದ ಕೆನಡಿ ಬಾಹ್ಯಾಕಾಶ ಕೇಂದ್ರ ದಿಂದ ಉಡಾವಣೆಯಾದ ನಾಸಾದ ಆಕ್ಸಿಯಮ್ -೪ ಕಾರ್ಯಾಚರಣೆಯನ್ನು ಅವರು ಮುನ್ನಡೆಸಿದ್ದರು. ಈ

ಕಾರ್ಯಾಚರಣೆಯ ಸಮಯದಲ್ಲಿ, ಬಾಹ್ಯಾಕಾಶದಲ್ಲಿ ವೈಜ್ಞಾನಿಕ ಸಂಶೋಧನೆಗಳು, ಭೂಗತ ಸೂಕ್ಷ್ಮ ಗುರುತ್ವಾಕ?ಣೆಯ ಪ್ರಯೋಗಗಳನ್ನು ನಡೆಸಿದರು. ಕಳೆದ ತಿಂಗಳು ೧೫ ರಂದು ಅವರು ಸುರಕ್ಷಿತವಾಗಿ ಭೂಮಿಗೆ ಮರಳಿದ್ದರು.

***********

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿ ಇಂದು ಸುಮಾರು ೧೧ ಸಾವಿರ ಕೋಟಿ ರೂಪಾಯಿ ಮೊತ್ತದ ಎರಡು ಪ್ರಮುಖ ರಾಷ್ಟ್ರೀಯ ಹೆದ್ದಾರಿ ಯೋಜನೆಗಳನ್ನು ಲೋಕಾರ್ಪಣೆ ಮಾಡಲಿದ್ದಾರೆ. ದೆಹಲಿ ವಲಯದ ದ್ವಾರಕಾ ಎಕ್ಸ್ ಪ್ರೆಸ್ ವೇ ಮತ್ತು ನಗರ ವಿಸ್ತೃತ ಪಥ ವನ್ನು ಉದ್ಘಾಟಿಸಲಿದ್ದಾರೆ. ದೆಹಲಿ ನಗರದ ಸಂಚಾರ ದಟ್ಟಣೆಯನ್ನು ಕಡಿಮೆಗೊಳಿಸಿ, ಸಂಚಾರದ ಅವಧಿ ತಗ್ಗಿಸಿ, ಉತ್ತಮ ಸಂಪರ್ಕ ಕಲ್ಪಿಸುವ ಸಮಗ್ರ ಯೋಜನೆಯಡಿ ಈ ಕಾಮಗಾರಿಗಳನ್ನು ನಿರ್ವಹಿಸಲಾಗಿದೆ ಎಂದು ಪ್ರಧಾನ ಮಂತ್ರಿಗಳ ಕಾರ್ಯಾಲಯ ತಿಳಿಸಿದೆ. ಪ್ರಧಾನ ಮಂತ್ರಿ ಈ ಸಂದರ್ಭದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ

*************

ಧರ್ಮಸ್ಥಳದ ವಿಚಾರದಲ್ಲಿ ಬಹುಸಂಖ್ಯಾತ ಸಮುದಾಯದ ಭಾವನೆಗಳನ್ನು ಹತ್ತಿಕ್ಕುವ ಕೆಲಸ ಮಾಡಲಾಗುತ್ತಿದೆ. ಇದು ಸರಿಯಲ್ಲ ಎಂದು ಕೇಂದ್ರ ಗ್ರಾಹಕ ವ್ಯವಹಾರ ಹಾಗೂ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಲ್ಹಾದ್ ಜೋಶಿ ಹುಬ್ಬಳ್ಳಿಯಲ್ಲಿ ನಿನ್ನೆ ಹೇಳಿದ್ದಾರೆ. ದೇಶದ ಅಸ್ಮಿತೆ, ನಂಬಿಕೆಯನ್ನು ಹರಣ ಮಾಡುವ ಪ್ರಯತ್ನ ನಡೆಸಲಾಗಿದೆ. ದೂರುದಾರನ ಹಿನ್ನೆಲೆ ಏನು, ಇದುವರೆಗೂ ಯಾಕೆ ಆತನನ್ನು ಬಂಧಿಸಿಲ್ಲ. ಜೊತೆಗೆ ಎಫ್ ಐ ಆರ್ ಕೂಡ ದಾಖಲು ಮಾಡಿಲ್ಲ. ರಾಜ್ಯ ಸರ್ಕಾರ ಈ ಸಂಬಂಧ ಮಧ್ಯಂತರ ವರದಿ ತರಿಸಿಕೊಳ್ಳಬೇಕು. ದೂರುದಾರನನ್ನು ಬಂಧಿಸಬೇಕು ಎಂದು ಆಗ್ರಹಿಸಿದರು.ರಾಜ್ಯ ಸರ್ಕಾರದ ಆರ್ಥಿಕ ಪರಿಸ್ಥಿತಿ ಸರಿಯಿಲ್ಲ, ಹಣಕಾಸಿನ ಸ್ಥಿತಿಗತಿಗಳನ್ನು ನೋಡಿಕೊಂಡು ಯೋಜನೆಗಳನ್ನು ಪ್ರಕಟಿಸಬೇಕು. ಈ ಸಂಬಂಧ ರಾಜ್ಯ ಸರ್ಕಾರದ ಹಲವು ಸಚಿವರೇ ಅನೇಕ ಕಡೆ ಪ್ರಸ್ತಾಪ ಮಾಡಿದ್ದಾರೆ ಎಂದು ಹೇಳಿದರು.

*************

ಚೈನಾ ವಿದೇಶಾಂಗ ಸಚಿವ ಹಾಗೂ ಚೈನಾ ಕಮ್ಯುನಿಸ್ಟ್ ಪಾರ್ಟಿಯ ಪಾಲಿಟ್ ಬ್ಯೂರೋ ಸದಸ್ಯ ವಾಂಗ್ ಯಿ ಅವರು ನಾಳೆ ಎರಡು ದಿನಗಳ ಭಾರತ ಭೇಟಿಗೆ ಆಗಮಿಸಲಿದ್ದಾರೆ. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರ ಆಹ್ವಾನದ ಮೇರೆಗೆ ಭಾರತಕ್ಕೆ ಆಗಮಿಸುತ್ತಿರುವ ವಾಂಗ್ ಯಿ ಅವರು, ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಭೇಟಿಯ ವೇಳೆ ವಾಂಗ್ ಯಿ ಅವರು ಭಾರತ - ಚೈನಾ ಗಡಿ ವಿ?ಯ ಕುರಿತ ೨೪ನೇ

ಸುತ್ತಿನ ವಿಶೇ? ಪ್ರತಿನಿಧಿಗಳ ಮಾತುಕತೆಯಲ್ಲಿ ಭಾಗಿಯಾಗಲಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

*************

ಬಿಜೆಪಿ ಸಂಸದೀಯ ಮಂಡಳಿ ಸಭೆ ಇಂದು ನವದೆಹಲಿಯಲ್ಲಿ ನಡೆಯಲಿದೆ. ಮಂಡಳಿಯ ಎಲ್ಲಾ ಸದಸ್ಯರು ಸಭೆಯಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ. ಉಪರಾಷ್ಟ್ರಪತಿ ಚುನಾವಣೆಗೆ ಅಭ್ಯರ್ಥಿಯನ್ನು ಸಭೆ ಆಯ್ಕೆ ಮಾಡುವ ಸಾಧ್ಯತೆಯಿದೆ. ಉಪರಾಷ್ಟ್ರಪತಿ ಚುನಾವಣೆಗೆ ಅಭ್ಯರ್ಥಿ ಆಯ್ಕೆ ಅಧಿಕಾರವನ್ನು ಎನ್‌ಡಿಎ ಮೈತ್ರಿಕೂಟ ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರಿಗೆ ನೀಡಿದೆ. ಎನ್ ಡಿಎ ಮೈತ್ರಿಕೂಟಕ್ಕೆ ಸ್ಪಷ್ಟ ಬಹುಮತ ಇರುವ ಹಿನ್ನೆಲೆಯಲ್ಲಿ ಆಡಳಿತಾರೂಢ ಪಕ್ಷ ತನ್ನ ಅಭ್ಯರ್ಥಿಯನ್ನು ಗೆಲ್ಲಿಸಿಕೊಳ್ಳುವ ಸಾಮರ್ಥ್ಯವನ್ನು ಹೊಂದಿದೆ. ಮುಂದಿನ ತಿಂಗಳು ೯ ರಂದು ನಡೆಯಲಿರುವ ಚುನಾವಣೆಗೆ ನಾಮಪತ್ರ ಸಲ್ಲಿಸಲು ಗುರುವಾರದ ವರೆಗೆ ಅವಕಾಶವಿದೆ. ಜಗದೀಪ್ ಧನ್‌ಕರ್ ಅವರು ಉಪರಾಷ್ಟ್ರಪತಿ ಹುದ್ದೆಗೆ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಈ ಚುನಾವಣೆ ನಡೆಯುತ್ತಿದೆ.

*************

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ನಿನ್ನೆ ನವದೆಹಲಿಯಲ್ಲಿ ದಕ್ಷಿಣ ಕೊರಿಯಾದ ವಿದೇಶಾಂಗ ಸಚಿವ ಚೋ ಹ್ಯುನ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ವ್ಯಾಪಾರ, ಉತ್ಪಾದನೆ, ಸಾಗರ ವಲಯ ಮತ್ತು ಜನರಿಂದ ಜನರ ನಡುವಿನ ಬಾಂಧವ್ಯ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಫಲಪ್ರದ ಚರ್ಚೆಗಳಲ್ಲಿ ಉಭಯ ನಾಯಕರು ಭಾಗವಹಿಸಿದ್ದಾಗಿ ಡಾ. ಎಸ್ ಜೈಶಂಕರ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಕೃತಕ ಬುದ್ಧಿಮತ್ತೆ, ಸೆಮಿಕಂಡಕ್ಟರ್, ಶುದ್ಧ ಇಂಧನ ಮತ್ತು ರಕ್ಷಣೆ ಸೇರಿದಂತೆ ಹಲವು ವಲಯಗಳಲ್ಲಿ ಹೊಸ ಅವಕಾಶಗಳನ್ನು ಅನ್ವೇಷಿಸಲಾಗಿದೆ. ಇಂಡೋ-ಪೆಸಿಫಿಕ್ ಪ್ರದೇಶ ಮತ್ತು ಪ್ರಸ್ತುತ ಜಾಗತಿಕ ಬೆಳವಣಿಗೆಗಳ ಬಗ್ಗೆಯೂ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡಿರುವುದಾಗಿ ತಿಳಿಸಿದ್ದಾರೆ.

*************

ಪ್ರತಿಯೊಬ್ಬರೂ ತಮ್ಮ ತಮ್ಮ ಕರ್ತವ್ಯಗಳನ್ನು ಪ್ರತಿಫಲಾಪೇಕ್ಷೆಯಿಲ್ಲದೇ ನಿಭಾಯಿಸಬೇಕು. ಈ ಸಂದೇಶವು ಪ್ರತಿಯೊಬ್ಬರಿಗೂ ಅನ್ವಯವಾಗುತ್ತದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಹೇಳಿದ್ದಾರೆ. ಗದಗ ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಭಗವಾನ್ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶ್ರೀ ಕೃಷ್ಣ ಪರಮಾತ್ಮನು ಉಪದೇಶಿಸಿದ ಭಗವದ್ಗೀತೆಯು, ವಿಶ್ವದಲ್ಲಿಯೇ ಅತೀ ಹೆಚ್ಚು

ಪ್ರಸಿದ್ಧವಾಗಿವೆ. ಹಿಂದೂ ಸಂಸ್ಕೃತಿಯ ಪವಿತ್ರ ಗ್ರಂಥವಾಗಿದೆ. ಭಗವದ್ಗೀತೆ ಮೂಲಕ ಜನರಿಗೆ ಕೃಷ್ಣ ಪರಮಾತ್ಮ "ನೀನು ಕರ್ತವ್ಯ ನಿಭಾಯಿಸು. ಪ್ರತಿಫಲ ಭಗವಂತನಿಗೆ ಬಿಡು" ಎಂದು ತಿಳಿಸಿದ್ದಾರೆ ಎಂದರು.

*************

ಮಣಿಪುರ ರಾಜ್ಯಪಾಲರನ್ನಾಗಿ ಅಜೇಯ್‌ಕುಮಾರ್ ಬಲ್ಲಾ ಅವರನ್ನು ನೇಮಿಸಿ ಹೆಚ್ಚುವರಿ ಹೊಣೆಯನ್ನು ವಹಿಸಲಾಗಿದೆ. ಅಜೇಯ್ ಕುಮಾರ್ ಬಲ್ಲಾ ಅವರು ಈಗ  ನಾಗಾಲ್ಯಾಂಡ್ ರಾಜ್ಯಪಾಲರಾಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ.

*************

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ನೇಪಾಳಕ್ಕೆ ಇಂದಿನಿಂದ ಎರಡು ದಿನಗಳ ಕಾಲ ಭೇಟಿ ನೀಡಲಿದ್ದಾರೆ. ನೇಪಾಳದ ವಿದೇಶಾಂಗ ಕಾರ್ಯದರ್ಶಿ ಅಮೃತ್ ಬಹದೂರ್ ರೈ ಅವರ ಆಹ್ವಾನದ ಮೇರೆಗೆ ವಿಕ್ರಮ್ ಮಿಸ್ರಿ ನೇಪಾಳಕ್ಕೆ ಭೇಟಿ ನೀಡುತ್ತಿದ್ದಾರೆ. ನೇಪಾಳದ ಪ್ರಧಾನ ಮಂತ್ರಿ ಕೆ.ಪಿ. ಶರ್ಮಾ ಒಲಿ ಮುಂದಿನ ತಿಂಗಳು ಭಾರತ ಪ್ರವಾಸ ಕೈಗೊಳ್ಳುವ ನಿರೀಕ್ಷೆ ಇರುವ ಹಿನ್ನೆಲೆಯಲ್ಲಿ ಮಿಸ್ರಿ ಈ ಭೇಟಿ ನೀಡುತ್ತಿದ್ದಾರೆ.

ಭಾರತ-ನೇಪಾಳ, ಇತ್ತೀಚಿನ ವರ್ಷಗಳಲ್ಲಿ ವಿವಿಧ ಕ್ಷೇತ್ರಗಳಲ್ಲಿ ಬಲವಾದ ಸ್ನೇಹಪರ ಸಹಕಾರ ಹೊಂದಿವೆ. ನೆರೆ ಮೊದಲು ನೀತಿಯಡಿ ಭಾರತ ನೇಪಾಳದ ಜೊತೆಗಿನ ಸಂಬಂಧಕ್ಕೆ ಆದ್ಯತೆ ನೀಡುತ್ತಿದೆ. ಕಾರ್ಯದರ್ಶಿ ಭೇಟಿ ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸಲು ಸದಾವಕಾಶ ಒದಗಿಸುತ್ತಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

*************

ಉತ್ತರ ಮರಿಯಾನಾ ದ್ವೀಪಗಳಲ್ಲಿ ನಡೆದ ಸೈಪಾನ್ ಇಂಟರ್‌ನ್ಯಾ?ನಲ್ ೨೦೨೫ರ ಬ್ಯಾಡ್ಮಿಂಟನ್ ಟೂರ್ನಿಯ ಸಿಂಗಲ್ಸ್‌ನಲ್ಲಿ ಭಾರತದ ತಾನ್ಯಾ ಹೇಮಂತ್ ನಿನ್ನೆ ಪ್ರಶಸ್ತಿ ಮುಡಿಗೇರಿಸಿಕೊಂಡರು. ಫೈನಲ್‌ನಲ್ಲಿ ಜಪಾನ್‌ನ ಕನೇ ಸಕೈ ಅವರನ್ನು ೧೫-೧೦, ೧೫-೮ ಸೆಟ್‌ಗಳಿಂದ ಸೋಲಿಸಿ ಪ್ರಶಸ್ತಿ ತಮ್ಮದಾಗಿಸಿಕೊಂಡರು. ಪ್ರಶಸ್ತಿಯನ್ನು ಗೆಲ್ಲುವ ನೆಚ್ಚಿನ ಆಟಗಾರ್ತಿಯಾಗಿದ್ದ ತಾನ್ಯಾ ಸೆಮಿಫೈನಲ್ಸ್‌ನಲ್ಲಿ ಜಪಾನ್‌ನ ರಿರಿನಾ ಹಿರಾಮೊಟೊ, ಕ್ವಾರ್ಟರ್-ಫೈನಲ್ಸ್‌ನಲ್ಲಿ ಸಿಂಗಾಪುರದ ಲೀ ಕ್ಸಿನ್ ಯಿ ಮೇಗನ್ ಮತ್ತು ೧೬ ರ ಸುತ್ತಿನಲ್ಲಿ ಜಪಾನ್‌ನ ನೋಡೋಕಾ ಸುನಕಾವಾ ಅವರನ್ನು ಸೋಲಿಸಿದ್ದರು. ಇದು ತಾನ್ಯಾ ಅವರ ವ?ದ ಮೊದಲ ಅಂತರರಾಷ್ಟ್ರೀಯ ಚಾಲೆಂಜ್ ಪ್ರಶಸ್ತಿ ಮತ್ತು ಅವರ ವೃತ್ತಿಜೀವನದ ನಾಲ್ಕನೆಯ ಪ್ರಶಸ್ತಿಯಾಗಿದೆ.

*************

ಕೋಲ್ಕತ್ತಾದ ವಿವೇಕಾನಂದ ಯುಬಾ ಭಾರತಿ ಕ್ರಿರಂಗನ್‌ನಲ್ಲಿ ನಡೆಯುವ ಡುರಾಂಡ್ ಕಪ್‌ನ ಕ್ವಾರ್ಟರ್ ಫೈನಲ್ಸ್‌ನಲ್ಲಿ ಈಸ್ಟ್ ಬೆಂಗಾಲ್ ತಂಡವನ್ನು ಮೋಹನ್ ಬಗಾನ್ ಸೂಪರ್ ಜೈಂಟ್ ತಂಡವು ಇಂದು ಎದುರಿಸಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ಸಂಜೆ ೭:೦೦ ಗಂಟೆಗೆ ಆರಂಭವಾಗಲಿದೆ. ಎರಡೂ ತಂಡಗಳು ತಮ್ಮ ಎಲ್ಲಾ ಗುಂಪು ಹಂತದ ಪಂದ್ಯಗಳನ್ನು ಗೆದ್ದು ಅತ್ಯುತ್ತಮ ಫಾರ್ಮ್‌ನಲ್ಲಿರುವ ಕಾರಣ ಇದು ವ?ದ ಅತಿದೊಡ್ಡ ಮುಖಾಮುಖಿ ಇದಾಗಿದೆ.

*************

ಆಸ್ಟ್ರೇಲಿಯಾದಲ್ಲಿ ನಡೆಯುತ್ತಿರುವ ಬೇಗಾ ಓಪನ್ ಸ್ಕ್ಯಾಷ್ ಟೂರ್ನಿಯ ಫೈನಲ್‌ನಲ್ಲಿ ಭಾರತದ ಅನಹತ್ ಸಿಂಗ್ ಅವರು ಈಜಿಪ್ಟ್‌ನ ಹಬೀಬಾ ಹನಿ ಅವರನ್ನು ಎದುರಿಸಲಿದ್ದಾರೆ. ಪ್ರಶಸ್ತಿಗಾಗಿ ತೀವ್ರ ಹಣಾಹಣಿ ನಡೆಯುವ ನಿರೀಕ್ಷೆಯಿದೆ. ಅಗ್ರ ಶ್ರೇಯಾಂಕಿತ ಅನಹತ್ ಸಿಂಗ್ ಅವರು ನಿನ್ನೆ ಸೆಮಿಫೈನಲ್ಸ್‌ನಲ್ಲಿ ಈಜಿಪ್ಟ್‌ನ ನೌರ್ ಖಫಾಗ್ಯಾ ಅವರನ್ನು ೩-೨ ಅಂತರದಲ್ಲಿ ಮಣಿಸಿದರು. ಈ ಟೂರ್ನಿಯಲ್ಲಿ ಭಾರತದ ಆಟಗಾರ ಎಲ್ಲಾ ಹಂತದಲ್ಲೂ ಮೇಲುಗೈ ಸಾಧಿಸಿ, ಚಾಂಪಿಯನ್ ಪಟ್ಟ ಅಲಂಕರಿಸುವ ನೆಚ್ಚಿನ ಆಟಗಾರರಾಗಿ ಹೊರಹೊಮ್ಮಿದ್ದಾರೆ. ಜಪಾನ್‌ನಲ್ಲಿ ತೀವ್ರ ಪ್ರಮಾಣದಲ್ಲಿ ತಾಪಮಾನ ಏರಿಕೆಯಾಗುತ್ತಿದೆ. ಬಹುತೇಕ ನಗರಗಳಲ್ಲಿ ಗರಿಷ್ಠ ಉಷ್ಣಾಂಶ ೩೫ ಡಿಗ್ರಿ ಸೆಲ್ಸಿಯಸ್‌ಗಿಂತ ಅಧಿಕ ತಾಪಮಾನ ದಾಖಲಾಗಿದೆ ಎಂದು ಜಪಾನ್‌ನ ಹವಾಮಾನ ಇಲಾಖೆ ತಿಳಿಸಿದೆ. ಮುಂಬರುವ ದಿನಗಳಲ್ಲಿ ತಾಪಮಾನದಲ್ಲಿ ಮತ್ತಷ್ಟು ಏರಿಕೆಯಾಗುವ ನಿರೀಕ್ಷೆಯಿದೆ ಎಂದು ತಿಳಿಸಿದೆ.

******ಇಲ್ಲಿಗೆ ನಮ್ಮ ವಾರ್ತಾ ಪ್ರಸಾರ ಮುಕ್ತಾಯವಾಯಿತು*******